## ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

ಐರಾವತ

# “ಐರಾವತ ಯೋಜನೆ”

ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮವು ಲಘು ವಾಹನ ಚಾಲನಾ ಪರವಾನಗಿ ಹೊಂದಿರುವ ಪರಿಶಿಷ್ಟ ಜಾತಿಯ ನಿರುದ್ಯೋಗಿ ವಿಧ್ಯಾವಂತ ಯುವಕ/ ಯುವತಿಯರಿಗೆ ಪ್ರವಾಸಿ ಟ್ಯಾಕ್ಸಿಗಳ ಮಾಲೀಕರನ್ನಾಗಿ ಮಾಡಿ “ಓಲಾ”/“ಉಬರ್/ಮೇರು” ಸಂಸ್ಥೆಗಳ ಸಹಯೋಗದಲ್ಲಿ ಅತಿ ಹೆಚ್ಚು ಆದಾಯ ಪಡೆಯುವ **“ಐರಾವತ ಯೋಜನೆ”** ಅನುಷ್ಠಾನಗೊಳಿಸಲು ಉದ್ದೇಶಿಸಿದೆ. ಕರ್ನಾಟಕ ರಾಜ್ಯ ಅಂತರಾಷ್ಟ್ರೀಯ ಮಟ್ಟದ ಪ್ರವಾಸಿಗರ ತಾಣವಾಗಿದ್ದು, ಈ ಯೋಜನೆಗೆ ಹೆಚ್ಚಿನ ಬೇಡಿಕೆ ಇರುತ್ತದೆ.

ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಈ ಯೋಜನೆಗೆ ಗರಿಷ್ಟ ರೂ.5.00ಲಕ್ಷಗಳವರೆಗೆ ನಿಗಮದಿಂದ ಸಹಾಯಧನ ಒದಗಿಸಲಾಗುವುದು. ಉಳಿದ ಭಾಗ ಬ್ಯಾಂಕ್/ಹಣಕಾಸು ಸಂಸ್ಥೆ/ಫಲಾನುಭವಿಯ ವಂತಿಕೆಯಿಂದ ಭರಿಸಿ ಯೋಜನೆಯನ್ನು ಅನುಷ್ಟಾನ ಮಾಡಲಾಗುವುದು.

ಆಯ್ಕೆಯಾದ ಫಲಾನುಭವಿಗಳಿಗೆ “ಓಲಾ”/”ಉಬರ್/ಮೇರು” ಸಂಸ್ಥೆಗಳೊಂದಿಗೆ ಟೈ-ಅಪ್ ಮಾಡಿಕೊಂಡು ಬೇಡಿಕೆ ಇರುವ ಮುಖ್ಯ ನಗರ ಪ್ರದೇಶಗಳಾದ ರಾಜಧಾನಿ ಬೆಂಗಳೂರು, ಮೈಸೂರು, ಮಂಗಳೂರು, ಹುಬ್ಬಳ್ಳಿ, ಧಾರವಾಡ ಇನ್ನಿತರೇ ಜಿಲ್ಲಾ ಕೇಂದ್ರಗಳಲ್ಲಿ ವಾಹನ ಚಾಲನೆ ಮಾಡಲು ವ್ಯವಸ್ಥೆ ಮಾಡಿ, ಯೋಜನೆಯನ್ನು ರೂಪಿಸಲಾಗಿದೆ.

## ಸಾಮಾನ್ಯ ಅರ್ಹತೆಗಳು:

1. ಅರ್ಜಿದಾರರು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು.
2. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
3. ಅರ್ಜಿದಾರರು 21 ವರ್ಷದಿಂದ 50 ವರ್ಷದವರೆಗಿನ ವಯೋಮಾನದವರಾಗಿರಬೇಕು.
4. ಲಘು ವಾಹನ ಚಾಲನಾ ಪರವಾನಗಿ ಹೊಂದಿರಬೇಕು.
5. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನವು ರೂ.5,00,000/- ಮಿತಿಯೊಳಗಿರಬೇಕು.
6. ಅರ್ಜಿದಾರರು/ಕುಟುಂಬದ ಅವಲಂಬಿತ ಯಾವುದೇ ಸದಸ್ಯರು ಈ ಹಿಂದೆ ನಿಗಮ/ ಸರ್ಕಾರದಿಂದ ರೂ.1,00,000/- ಮೇಲ್ಪಟ್ಟು ಸೌಲಭ್ಯ ಪಡೆದಿದ್ದಲ್ಲಿ, ಅಂತಹ ಫಲಾನುಭವಿಗಳು ಈ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ.

## ಷರತ್ತುಗಳು:

1. “ಓಲಾ”/“ಉಬರ್/ಮೇರು” ಸಂಸ್ಥೆಯೊಂದಿಗೆ ಟೈ-ಅಪ್ ಮಾಡಿಕೊಂಡು ಸೌಲಭ್ಯ ಪಡೆಯಲು ಬದ್ಧರಿರಬೇಕು.
2. ಅರ್ಜಿದಾರರು ಆಯ್ಕೆ ಸಮಿತಿಯಿಂದ ಆಯ್ಕೆಯಾಗಬೇಕು. ಆಯ್ಕೆಯಾದ ಫಲಾನುಭವಿಯು ಓಲಾ/ಉಬರ್/ಮೇರು ಸಂಸ್ಥೆಯಿಂದ ಟ್ಯಾಕ್ಸಿಯನ್ನು ಯಶಸ್ವಿಯಾಗಿ ನಿರ್ವಹಿಸುವ ಬಗ್ಗೆ ಜ್ಞಾನವನ್ನು ಪಡೆಯುವ ಕಾರ್ಯಕ್ರಮಕ್ಕೆ ಹಾಜರಾಗಬೇಕು.